# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 597(582) |
| ಸದಸ್ಯರ ಹೆಸರು | : | ಶ್ರೀ ವೈ.ಎಂ.ಸತೀಶ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 22.07.2024 |
| ಉತ್ತರಿಸುವ ಸಚಿವರು | : | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಜಿಲ್ಲಾ ಆಯುಷ್ ಅಧಿಕಾರಿಗಳ ಸಂಖ್ಯೆ ಎಷ್ಟು; ಇವರುಗಳ ಕೆಲಸ ಕಾರ್ಯಗಳೇನು; ಸದರಿಯವರು ಒಂದೇ ಹುದ್ದೆಯಲ್ಲಿ / ಜಿಲ್ಲೆಯಲ್ಲಿ ಎಷ್ಟು ವರ್ಷಗಳ ಕಾಲ ಕಾರ್ಯನಿರ್ವಹಿಸಬಹುದು; (ಮಾಹಿತಿ ಒದಗಿಸುವುದು) | ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಜಿಲ್ಲಾ ಆಯುಷ್ ಅಧಿಕಾರಿಗಳ ಸಂಖ್ಯೆ 30.<br><br>ಜಿಲ್ಲಾ ಆಯುಷ್ ಅಧಿಕಾರಿ ವೃಂದದ ಹುದ್ದೆಗಳು ಗ್ರೂಪ್ 'ಎ' ಹಿರಿಯ ಶ್ರೇಣಿಯ ಆಡಳಿತಾತ್ಮಕ ಹುದ್ದೆಗಳಾಗಿದ್ದು, ಸಂಬಂಧಪಟ್ಟ ಜಿಲ್ಲೆಯಲ್ಲಿರುವ ಆಯುಷ್ ಸಂಸ್ಥೆಗಳು ಆಸ್ಪತ್ರೆ/ ಚಿಕಿತ್ಸಾಲಯಗಳು /ಖಾಸಗಿ ಚಿಕಿತ್ಸಾಲಯಗಳು ಈ ಅಧಿಕಾರಿಗಳ ಮೇಲ್ವಿಚಾರಣೆಗೆ ಒಳಪಟ್ಟಿರುತ್ತದೆ ಹಾಗೂ ಕೆ.ಪಿ.ಎಂ.ಇ. ಹಾಗೂ ಕೆ.ಎ.ಯು.ಪಿ. ಮಂಡಳಿಯ ಅಧಿನಿಯಮ ಮತ್ತು ನಿಯಮಗಳನ್ನು ಅನುಷ್ಠಾನಗೊಳಿಸುವುದು, ತಮ್ಮ ಜಿಲ್ಲೆಗಳಿಗೆ ಸಂಬಂಧಪಟ್ಟ ಮಾಹಿತಿಯನ್ನು ಒದಗಿಸುವುದು ಹಾಗೂ ಈ ಇಲಾಖೆಯಲ್ಲಿ ಸಾರ್ವಜನಿಕರಿಗೆ ಸೇವೆಯನ್ನು ಒದಗಿಸುವ ನಿಟ್ಟಿನಲ್ಲಿ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಿರುವ ಎಲ್ಲಾ ಕಾರ್ಯಕ್ರಮಗಳನ್ನು ವ್ಯವಸ್ಥಿತವಾಗಿ ಜಾರಿಗೊಳಿಸುವ ಸಂಪೂರ್ಣ ಜವಾಬ್ದಾರಿಯನ್ನು ಹಾಗೂ ರಾಷ್ಟ್ರೀಯ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಜವಾಬ್ದಾರಿಯನ್ನು ಹೊಂದಿರುತ್ತಾರೆ.<br><br>ಜಿಲ್ಲಾ ಆಯುಷ್ ಅಧಿಕಾರಿಗಳ ಹುದ್ದೆಯು ಗ್ರೂಪ್ 'ಎ' ವೃಂದದ ಹುದ್ದೆಯಾಗಿರುವುದರಿಂದ, ವರ್ಗಾವಣೆ ನಿಯಮಗಳನ್ವಯ ಒಂದು ಹುದ್ದೆ 02 ವರ್ಷಗಳ ಅವಧಿಯವರೆಗೆ ಕಾರ್ಯನಿರ್ವಹಿಸಲು ಅವಕಾಶವಿರುತ್ತದೆ. |
| (ಆ) | ಕಳೆದ ಮೂರು ವರ್ಷಗಳಿಂದ ಒಂದೇ ಜಾಗ / ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ಆಯುಷ್ ಅಧಿಕಾರಿಗಳ ಸಂಖ್ಯೆ ಎಷ್ಟು; ಸದರಿ ಅಧಿಕಾರಿಗಳು ಯಾವ ವರ್ಷದಿಂದ ಕಾರ್ಯ ನಿರ್ವಹಿಸುತ್ತಿದ್ದಾರೆ; (ಸಂಪೂರ್ಣ ಜಿಲ್ಲಾವಾರು ಮಾಹಿತಿ ನೀಡುವುದು). | ಆಯುಷ್ ಇಲಾಖೆಯಲ್ಲಿ ಕಳೆದ ಮೂರು ವರ್ಷಗಳಿಂದ ಒಂದೇ ಜಾಗ/ ಜಿಲ್ಲೆಯಲ್ಲಿ ಜಿಲ್ಲಾ ಆಯುಷ್ ಅಧಿಕಾರಿಗಳಾಗಿ ಕಾರ್ಯನಿರ್ವಹಿಸುತ್ತಿರುವ ವೈದ್ಯಾಧಿಕಾರಿಗಳು ಮತ್ತು ಹಿರಿಯ ವೈದ್ಯಾಧಿಕಾರಿಗಳ ಸಂಖ್ಯೆ : 05<br><br>ಸದರಿ ಅಧಿಕಾರಿಗಳು ಕಾರ್ಯ ನಿರ್ವಹಿಸುತ್ತಿರುವ ವಿವರ ಈ ಕೆಳಕಂಡಂತಿದೆ |

| ಕ್ರ. ಸಂ. | ವೈದ್ಯಾಧಿಕಾರಿಗಳು ಮತ್ತು ಹಿರಿಯ ವೈದ್ಯಾಧಿಕಾರಿಗಳ ಹೆಸರು | ಕರ್ತವ್ಯ ನಿರ್ವಹಿಸುತ್ತಿರುವ ಜಿಲ್ಲೆಯ ಹೆಸರು | ಜಿಲ್ಲಾ ಆಯುಷ್ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿರುವ ದಿನಾಂಕ |
|---|---|---|---|
| 1 | ಡಾ|| ಗೀತಾ ಎಸ್., ಹಿರಿಯ ವೈದ್ಯಾಧಿಕಾರಿಗಳು | ಜಿಲ್ಲಾ ಆಯುಷ್ ಕಛೇರಿ, ಚಿಕ್ಕಮಗಳೂರು | 01.07.2016 |
| 2 | ಡಾ|| ಮಹಮ್ಮದ್ ಇಕ್ಬಾಲ್ ಕೆ., ಹಿರಿಯ ವೈದ್ಯಾಧಿಕಾರಿಗಳು | ಜಿಲ್ಲಾ ಆಯುಷ್ ಕಛೇರಿ, ದಕ್ಷಿಣ ಕನ್ನಡ ಜಿಲ್ಲೆ | 28.06.2016 |
| 3 | ಡಾ|| ಲಲಿತಾ ಯ.ಹೆಚ್. ವೈದ್ಯಾಧಿಕಾರಿಗಳು | ಜಿಲ್ಲಾ ಆಯುಷ್ ಕಛೇರಿ, ಉತ್ತರ ಕನ್ನಡ ಜಿಲ್ಲೆ | 01.01.2019 |

<table>
<tr>
<td></td>
<td></td>
<td>
<table>
<tr><td>4</td><td>ಡಾ|| ವಂದನಾ ಜಿ. ಗಾಳಿಯವರ್, ಹಿರಿಯ ವೈದ್ಯಾಧಿಕಾರಿಗಳು</td><td>ಜಿಲ್ಲಾ ಆಯುಷ್ ಕಛೇರಿ, ಯಾದಗಿರಿ ಜಿಲ್ಲೆ</td><td>13.03.2020</td></tr>
<tr><td>5</td><td>ಡಾ|| ಶಂಕರ ಗೌಡ ಪಾಟೀಲ್, ವೈದ್ಯಾಧಿಕಾರಿಗಳು</td><td>ಜಿಲ್ಲಾ ಆಯುಷ್ ಕಛೇರಿ, ರಾಯಚೂರು ಜಿಲ್ಲೆ</td><td>01.02.2019</td></tr>
</table>
</td>
</tr>
<tr>
<td>(ಇ)</td>
<td>ಒಂದೇ ಜಿಲ್ಲೆಯಲ್ಲಿ 03 ವರ್ಷಗಳಿಗಿಂತ ಹೆಚ್ಚು ಕಾಲ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ಆಯುಷ್ ಅಧಿಕಾರಿಗಳನ್ನು ಕೂಡಲೇ ವರ್ಗಾಯಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;</td>
<td rowspan="2">ಜಿಲ್ಲಾ ಆಯುಷ್ ಅಧಿಕಾರಿಗಳ ಹುದ್ದೆಗಳು ಆಡಳಿತಾತ್ಮಕ ಹುದ್ದೆಗಳಾಗಿದ್ದು, ಗ್ರೂಪ್ 'ಎ' ವೃಂದಕ್ಕೆ ಸೇರಿರುತ್ತವೆ. ವರ್ಗಾವಣಾ ಮಾರ್ಗಸೂಚಿಗಳನ್ವಯ ಆಡಳಿತಾತ್ಮಕ ಹಿತದೃಷ್ಟಿಯಿಂದ ಸದರಿ ಅಧಿಕಾರಿಗಳನ್ನು ವರ್ಗಾಯಿಸುವ ಬಗ್ಗೆ ಸರ್ಕಾರದ ಪರಿಶೀಲನೆಯಲ್ಲಿದೆ.</td>
</tr>
<tr>
<td>(ಈ)</td>
<td>ಆಡಳಿತದಲ್ಲಿ ಪಾರದರ್ಶಕತೆ ತರುವ ನಿಟ್ಟಿನಲ್ಲಿ ಜಿಲ್ಲಾ ಆಯುಷ್ ಅಧಿಕಾರಿಗಳನ್ನು ಪ್ರತಿ 03 ವರ್ಷಗಳಿಗೊಮ್ಮೆ ಕಡ್ಡಾಯವಾಗಿ ವರ್ಗಾಯಿಸಲು ಸರ್ಕಾರದ ಕ್ರಮಗಳೇನು; (ಮಾಹಿತಿ ನೀಡುವುದು).</td>
</tr>
<tr>
<td>(ಉ)</td>
<td>ಔಷಧಿ ಖರೀದಿ ಹಾಗೂ ಇತರ ಟೆಂಡರ್ ಸಂಬಂಧಿತ ವಿಷಯದಲ್ಲಿ ಕೆಲವು ಜಿಲ್ಲಾ ಆಯುಷ್ ಅಧಿಕಾರಿಗಳು ಕೆ.ಟಿ.ಪಿ ಆಕ್ಟ್ ವಿರುದ್ಧವಾಗಿ ಕಾರ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ಮಾಹಿತಿ ನೀಡುವುದು)</td>
<td>ಬಂದಿದೆ.<br>ಮಂಗಳೂರು ಜಿಲ್ಲೆಯಲ್ಲಿ ಈ ಸಂಬಂಧ ದೂರು ಸ್ವೀಕೃತವಾಗಿದ್ದು, ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲೆ, ಇವರು ಮಂಗಳೂರಿನ ಆಯುಷ್ ಸಂಯುಕ್ತ ಆಸ್ಪತ್ರೆಯಲ್ಲಿ ಕೈಗೊಂಡ ಖರೀದಿ ಪ್ರಕ್ರಿಯೆಯಲ್ಲಿ ಸಿ.ಎಸ್.ಆರ್ ಅನುದಾನದ ಖರೀದಿಯಲ್ಲಿನ ನಿಯಮ ಉಲ್ಲಂಘನೆ & ಖರೀದಿಸಲಾದ ಸಾಧನ ಉಪಕರಣಗಳ ದರಗಳು ಮತ್ತು ಗುಣಮಟ್ಟದ ಬಗ್ಗೆ ವರದಿ ಸಲ್ಲಿಸುವಂತೆ ಕೋರಿದ್ದು, ಈ ಬಗ್ಗೆ ಆಯುಷ್ ನಿರ್ದೇಶನಾಲಯದ ಇಬ್ಬರು ಅಧಿಕಾರಿಗಳನ್ನು ಪರಿಶೀಲಿಸಿ ವರದಿ ಸಲ್ಲಿಸಲು ತೈನಾತಿಸಲಾಗಿದ್ದು, ಸದರಿ ವರದಿಯನ್ನು ಜಿಲ್ಲಾಧಿಕಾರಿಗಳು ದಕ್ಷಿಣ ಕನ್ನಡ ಜಿಲ್ಲೆ ಇವರಿಗೆ ಸಲ್ಲಿಸಲಾಗಿದೆ.</td>
</tr>
</table>

**ಸಂಖ್ಯೆ: ಆಕುಕ 184 ಪಿಟಿಡಿ 2024**

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು